ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ರೈತರಿಂದ ಕಬ್ಬು ಖರೀದಿ ಮಾಡುತ್ತಿರುವ ಬಗ್ಗೆ

ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

820 (944) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ಜಿಲ್ಲೆಯಲ್ಲಿ ಎಷ್ಟು ಸಹಕಾರಿ ಸಕ್ಕರೆ ಕಾರ್ಖಾನೆಗಳು ಕಾರ್ಯನಿರ್ವಹಣೆ ಮಾಡುತ್ತಿವೆ ; ಕಳೆದ 2019-20ನೇ ಸಾಲಿನಲ್ಲಿ ರೈತರಿಂದ ಎಷ್ಟು ಟನ್ ಕಬ್ಬು ಖರೀದಿ ಮಾಡಲಾಗಿದೆ;

(ಆ) ತಮಿಳುನಾಡು ಸಕ್ಕರೆ ಕಾರ್ಖಾನೆಗಳು ಮಂಡ್ಯದ ರೈತರಿಂದ ಕಬ್ಬು ಖರೀದಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಎಷ್ಟು ಕ್ವಿಂಟಾಲ್ ಕಬ್ಬನ್ನು ತಮಿಳುನಾಡು ಸಕ್ಕರೆ ಕಾರ್ಖಾನೆಗಳು ಖರೀದಿ ಮಾಡಿವೆ ; ರೈತರಿಗೆ ಸೂಕ್ತ ಸಮಯದಲ್ಲಿ ಹಣ ನೀಡಿರುವ ಬಗ್ಗೆ ಮಾಹಿತಿ ಒದಗಿಸುವುದು ?